ಕರ್ನಾಟಕ ಜಲಸಾರಿಗೆ ಮಂಡಳಿ
KARNATAKA MARITIME BOARD

ಮಾಸಿಕ ಮಾಹಿತಿ ಪತ್ರಿಕೆ
Monthly Newsletter

Volume 01 Issue 05
Oct-Nov 2024 Pages 08

KMB ಸುದ್ದಿ News

## ಕಬ್ಬಿಣ ಅದಿರು ರಪ್ತು ನಿಷೇಧ ಹಿಂಪಡೆಯುವಂತೆ ಒತ್ತಾಯ

# ಸಚಿವ ಮಂಕಾಳ ಎಸ್. ವೈದ್ಯರಿಗೆ ಕೆಎಂಬಿ ಸಿಇಒ ಮನವಿ



**ಕೆ.ಎಂ.ಬಿ ನ್ಯೂಸ್ ಬೆಂಗಳೂರು:** ರಾಜ್ಯದ ಕಿರು ಬಂದರುಗಳ ಮೂಲಕ ಕಬ್ಬಿಣ ಅದಿರು ರಪ್ತು ನಿಷೇಧಿಸುವ ಆದೇಶವನ್ನು ಹಿಂಪಡೆಯುವಂತೆ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರಾದ ಮಂಕಾಳ ಎಸ್. ವೈದ್ಯ ಅವರಿಗೆ ಕರ್ನಾಟಕ ಜಲಸಾರಿಗೆ ಮಂಡಳಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಯರಾಮ್ ರಾಯ್ ಪುರ ಅವರು ಮನವಿ ಸಲ್ಲಿಸಿದರು.

ಬೆಂಗಳೂರಿನ ವಿಧಾನಸೌಧ ಮೂರನೇ ಮಹಡಿಯಲ್ಲಿರುವ ಸಚಿವರ ಕಚೇರಿಯಲ್ಲಿ ನಡೆದ ಇಲಾಖೆಯ ಪ್ರಗತಿ ಪರಿಶೀಲನೆ ಸಭೆಯಲ್ಲಿ ತಿಳಿಸಿದರು.

ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಯಲ್ಲಿರುವ ತುರ್ತು ಸಮುದ್ರ ಕೊರೆತ ಪ್ರತಿಬಂಧಕ ಕಾಮಗಾರಿಗಳಿಗೆ ಹೆಚ್ಚುವರಿ ಒಟ್ಟು 15 ಕೋಟಿ ರೂಪಾಯಿಗಳು ಅನುದಾನ ನೀಡುವಂತೆ ಸಚಿವರಿಗೆ ಕೆಎಂಬಿ ಸಿಇಒ ಅವರು ಪ್ರಸ್ತಾವನೆ ಸಲ್ಲಿಸಿದರು.

2024–25ನೇ ಹಣಕಾಸು ವರ್ಷಕ್ಕೆ ಸಾಗರಮಾಲ ಯೋಜನೆಗೆ ರಾಜ್ಯದ ಪಾಲಿನ ಅನುದಾನವನ್ನು ಬಿಡುಗಡೆಗೊಳಿಸುವಂತೆ ಹಾಗೂ 5 ಸಾಗರಮಾಲಾ ಯೋಜನೆಗಳಿಗೆ ಸರ್ಕಾರದಿಂದ ಮರು ಮಂಜೂರಾತಿ ನೀಡುವಂತೆ ಸಚಿವರಿಗೆ ಜಯರಾಮ್ ರಾಯ್ ಪುರ ಅವರು ಒತ್ತಾಯಿಸಿದರು. ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮ ಮಾಲೀಕತ್ವದಲ್ಲಿರುವ ತದಡಿ ಬಂದರು ಲಿಮಿಟೆಡ್ ಅನ್ನು, ಕರ್ನಾಟಕ ಜಲಸಾರಿಗೆ ಮಂಡಳಿಗೆ ವರ್ಗಾಯಿಸುವ ಬಗ್ಗೆ ಸಚಿವರಿಗೆ ಒತ್ತಾಯಿಸಿದರು.

### ವಾಟರ್ ಏರೋಡ್ರೋಮ್ ಯೋಜನೆ

ಸಮುದ್ರ ವಿಮಾನ ಸೇವೆಗಳ ಕಾರ್ಯಾಚರಣೆಯು ಆಕರ್ಷಕ ಪ್ರವಾಸೋದ್ಯಮ ಚಟುವಟಿಕೆಗಳಲ್ಲಿ ಒಂದಾಗಿದ್ದು, ಸಾಕಷ್ಟು ಪ್ರಾವಸಿಗರನ್ನು ಗಮನ ಸೆಳೆಯುತ್ತಿದೆ. ಹೀಗಾಗಿ ರಾಜ್ಯ ಸರ್ಕಾರ ಈ ಯೋಜನೆಯನ್ನು ಪರಿಗಣಿಸಿ, ಇದಕ್ಕೆ ಹೆಚ್ಚಿನ ಆದ್ಯತೆ ನೀಡುವಂತೆ ಸಚಿವರಿಗೆ ಕೆಎಂಬಿ ಸಿಇಒ ಅವರು ತಿಳಿಸಿದರು.

### 60 ನೌಕರರ ನೇಮಕಾತಿ

ಕರ್ನಾಟಕ ಜಲಸಾರಿಗೆ ಮಂಡಳಿಗೆ 60 ನೌಕರರನ್ನು ನೇಮಕಾತಿಯನ್ನು ಮಾಡಿಕೊಳ್ಳುತ್ತಿದೆ. ಈ ನೇಮಕಾತಿ ಕರ್ನಾಟಕದ ಕಡಲತೀರಗಳ ಅಭಿವೃದ್ಧಿ, ನೌಕಾಯಾನ ಮತ್ತು ಬಂದರುಗಳ ನಿರ್ವಹಣೆ ಕುರಿತು ಹೆಚ್ಚು ಗಮನ ಹರಿಸಲು ಪ್ರಸ್ತುತ ಅವಶ್ಯಕವಾಗಿದೆ. ಹೀಗಾಗಿ ರಾಜ್ಯ ಸರ್ಕಾರ ಈ ನೇಮಕಾತಿಯನ್ನು ಅದಷ್ಟು ಬೇಗ ಪರಿಗಣಿಸಿ, ಅನುಮೋದನೆ ನೀಡುವಂತೆ ಸಚಿವರಿಗೆ ತಿಳಿಸಿದರು.

ಸಭೆಯಲ್ಲಿ ಮೂಲಸೌಲಭ್ಯ ಅಭಿವೃದ್ಧಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ ಕಾರ್ಯದರ್ಶಿ ಡಾ.ಎನ್. ಮಂಜುಳ, ಕರ್ನಾಟಕ ಜಲಸಾರಿಗೆ ಮಂಡಳಿಯ ನಿರ್ದೇಶಕ ಕ್ಯಾ.ಸಿ.ಸ್ವಾಮಿ, ಚೀಫ್ ಇಂಜಿನಿಯರ್ ಪ್ರಸನ್ನ ಕುಮಾರ್ ಶೇಟ್ ಹಾಗೂ ಇತರೆ ಇಲಾಖೆ ಅಧಿಕಾರಿಗಳು ಭಾಗವಹಿಸಿದರು.

Karnataka Maritime Board

KMB News - Published & printed by Chief Executive Officer, Karnataka Maritime Board, 3rd Floor, West Gate, Khanija Bhavan, Rebel Star Ambareesh Road, (Race Course Road), Bengaluru-560001 | Ph: 080-29577444 | Email: ceokmb2019@gmail.com

# ಬಂದರು ಇಲಾಖೆ ವಿಷಯ ಕುರಿತು ಸಚಿವರ ಜೊತೆ ಕೆಎಂಬಿ ಸಿಇಒ ಚರ್ಚೆ





**ಕೆ.ಎಂ.ಬಿ ನ್ಯೂಸ್ ಬೆಂಗಳೂರು:** ನಗರದ ವಿಧಾನಸೌಧದ ಎರಡನೇ ಮಹಡಿಯ ಬಂದರು ಇಲಾಖೆಯ ಸಚಿವರ ಕಚೇರಿಯಲ್ಲಿ ಬಂದರು ಇಲಾಖೆಗೆ ಸಂಬಂಧ ಪಟ್ಟ ವಿಷಯಗಳ ಕುರಿತು ಅಧಿಕಾರಿಗಳೊಂದಿಗೆ ಸಚಿವ ಮಂಕಾಳ ಎಸ್ ವೈದ್ಯ ಅವರು ಸಭೆ ನಡೆಸಿ, ಹಲವು ವಿಷಯಗಳ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಕರ್ನಾಟಕ ಜಲಸಾರಿಗೆ ಮಂಡಳಿಯ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಜಯರಾಮ್ ರಾಯ್ ಪುರ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ ಕಾರ್ಯದರ್ಶಿ ಡಾ.ಎನ್ ಮಂಜುಳ ಹಾಗೂ ಕೆ.ಎಂ.ಬಿಯ ಸಿಬ್ಬಂದಿಯವರು ಭಾಗವಹಿಸಿದರು.

# ಹಳೆ ಬಂದರು ಮೀನುಗಾರರ ಸಮಸ್ಯೆ: ಮೀನುಗಾರರ ನಿಯೋಗ ಸ್ಪೀಕರ್ ಖಾದರ್ ಉಪಸ್ಥಿತಿಯಲ್ಲಿ ಸಚಿವ ಮಂಕಾಳ ವೈದ್ಯರ ಭೇಟಿ

**ಕೆ.ಎಂ.ಬಿ ನ್ಯೂಸ್ ಮಂಗಳೂರು:** ಮಂಗಳೂರಿನ ವಿವಿಧ ಮೀನುಗಾರಿಕಾ ಸಂಘಟನೆಯ ಮುಖಂಡರ ನಿಯೋಗವೊಂದು ಸ್ಪೀಕರ್ ಯು.ಟಿ.ಖಾದರ್ ಉಪಸ್ಥಿತಿಯಲ್ಲಿ ಮೀನುಗಾರಿಕಾ ಸಚಿವರನ್ನು ಭೇಟಿಯಾಗಿ ಮೀನುಗಾರರ ವಿವಿಧ ಸಮಸ್ಯೆ ಹಾಗೂ ಬೇಡಿಕೆಗಳ ಬಗ್ಗೆ ಚರ್ಚೆ ನಡೆಸಿ, ಮೀನುಗಾರರು ಎದುರಿಸುತ್ತಿರುವ ಸಮಸ್ಯೆಗಳನ್ನು ಬಗೆಹರಿಸುವಂತೆ ಒತ್ತಾಯಿಸಿದರು.

ಸಮಸ್ಯೆಗಳನ್ನು ಆಲಿಸಿದ ಮೀನುಗಾರಿಕಾ ಸಚಿವ ಮಾಂಕಾಳ ಎಸ್. ವೈದ್ಯ ಅದಷ್ಟು ಬೇಗ ಸಮಸ್ಯೆ ಬಗೆಹರಿಸಲು ಸೂಕ್ತ ಕ್ರಮ ವಹಿಸುವುದಾಗಿ ಭರವಸೆ ನೀಡಿದರು.

ಮಂಗಳೂರು ಮೀನುಗಾರಿಕಾ ಬಂದರಿನಲ್ಲಿ 1500ಕ್ಕೂ ಹೆಚ್ಚಿನ ಮೀನುಗಾರಿಕಾ ಬೋಟುಗಳು ಇದ್ದರೂ, ಕನಿಷ್ಟ 500 ಬೋಟುಗಳಿಗೆ ಅಗತ್ಯವಿರುವ ಪೂರಕ ವ್ಯವಸ್ಥೆಗಳು ಇಲ್ಲವಾಗಿವೆ. 2023ನೇ ಸಾಲಿನಲ್ಲಿ 49.50 ಕೋಟಿ ರೂ.ಗಳಿಗೆ ರಾಜ್ಯ ಸರಕಾರ ಅನುಮೋದನೆ ನೀಡಿದೆ. ಕಳೆದೊಂದು ವರ್ಷದಿಂದ ಟೆಂಡರ್ ಹಂತದಲ್ಲಿರುವ 3 ನೇ ಹಂತದ ಮೀನುಗಾರಿಕಾ ಧಕ್ಕೆ ವಿಸ್ತರಣೆಯ ಉಳಿಕೆ ಕಾಮಗಾರಿಯನ್ನು ಕೂಡಲೇ ಪ್ರಾರಂಭಿಸಿ, ಮುಂದಿನ ಒಂದು ವರ್ಷದೊಳಗೆ ಈ ಬಂದರನ್ನು ಮೀನುಗಾರರ ಬಳಕೆಗೆ ಯೋಗ್ಯವನ್ನಾಗಿಸಬೇಕು ಎಂದು ಮನವಿ ಮಾಡಿಕೊಂಡರು.

ಮಂಗಳೂರು ಬಂದರಿನ ಅಳಿವೆ ಭಾಗದಲ್ಲಿ ಪ್ರತೀ ವರ್ಷ ಡ್ರೆಡ್ಜಿಂಗ್



ಸಮಸ್ಯೆ ಇದ್ದು, ಹಲವಾರು ಬೋಟಗಳು ಈ ಭಾಗದಲ್ಲಿ ಮಗುಚಿ ಮೀನುಗಾರರು ಸಾಕಷ್ಟು ಸಮಸ್ಯೆ ಎದುರಿಸುತ್ತಿದ್ದಾರೆ. ಈ ಬಗ್ಗೆ ಅದಷ್ಟು ಬೇಗ ಸಮಸ್ಯೆ ಪರಿಹಾರಿಸುವುದಾಗಿ ಸಚಿವರು ಭರವಸೆ ನೀಡಿದರು.

ಸಭೆಯಲ್ಲಿ ಕರ್ನಾಟಕ ಜಲಸಾರಿಗೆ ಮಂಡಳಿಯ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಜಯರಾಮ್ ರಾಯ್ ಪುರ, ಟ್ರಾಲ್ ಬೋಟ್ ಮೀನುಗಾರರ ಸಂಘದ ಅಧ್ಯಕ್ಷ ಚೇತನ್ ಬೆಂಗ್ರೆ, ಪರ್ಸಿನ್ ಬೋಟ್ ಮೀನುಗಾರರ ಸಂಘದ ಅಧ್ಯಕ್ಷ ಅನಿಲ್ ಕುಮಾರ್ ಬೊಕ್ಕಪಟ್ಣ, ಟ್ರಾಲ್ ಬೋಟ್ ಯೂನಿಯನ್ ಉಪಾಧ್ಯಕ್ಷ ಇಬ್ರಾಹಿಂ ಬೆಂಗ್ರೆ, ಕಾರ್ಯದರ್ಶಿ ರಾಜೇಶ್ ಪುತ್ರನ್, ರಾಷ್ಟ್ರೀಯ ಮೀನುಗಾರರ ಸಂಘಟನೆಯ ಮನೋಹರ್ ಬೋಳೂರು, ಮೊದಲಾದವರಿದ್ದರು.

# ಆಲಮಟ್ಟಿ, ಹೆರಕಲ್ ಗ್ರಾಮಗಳಲ್ಲಿರುವ ಉದ್ದೇಶಿತ ಯೋಜನಾ ಸ್ಥಳಗಳಿಗೆ ಕೆಎಂಬಿ ಸಿಇಒ ಭೇಟಿ

**ಕೆ.ಎಂ.ಬಿ ನ್ಯೂಸ್ ವಿಜಯಪುರ:** ಕೇಂದ್ರ ಮತ್ತು ರಾಜ್ಯ ಸರ್ಕಾರದ ಮಹತ್ವಕಾಂಕ್ಷಿ ಯೋಜನೆಯಾದ ಸಾಗರಮಾಲ ಯೋಜನೆಯಡಿ ಪ್ರವಾಸೋದ್ಯಮ ಪೂರಕವಾಗಿ ಮತ್ತು ಸ್ಥಳೀಯ ಜನರಿಗೆ ಅನುಕೂಲವಾಗುವ ಆಲಮಟ್ಟಿ, ಹೆರಕಲ್ ಗ್ರಾಮಗಳಲ್ಲಿರುವ ಉದ್ದೇಶಿತ ಯೋಜನೆಯನ್ನು ಅಭಿವೃದ್ಧಿ ಪಡಿಸಲಾಗುತ್ತದೆ ಎಂದು ಕರ್ನಾಟಕ ಜಲಸಾರಿಗೆ ಮಂಡಳಿಯ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಜಯರಾಮ್ ರಾಯ್ ಪುರ ಅವರು ತಿಳಿಸಿದರು.

ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯ ಆಲಮಟ್ಟಿ ಮತ್ತು ಹೆರಕಲ್ ಗ್ರಾಮಗಳಲ್ಲಿರುವ ಉದ್ದೇಶಿತ ಯೋಜನಾ ಸ್ಥಳಗಳ ಕಾರ್ಯಸಾಧ್ಯತೆ, ಯೋಜನೆಯ ಭೂಸ್ವಾಧೀನ ಮತ್ತು ಜಲಸಾರಿಗೆ ಉಪಯುಕ್ತತೆ ಬಗ್ಗೆ ಪರಿಶೀಲನೆ ಹಾಗೂ ಆಲಮಟ್ಟಿ ಆಣೆಕಟ್ಟಿನ ಕೆಳಭಾಗದಲ್ಲಿರುವ 25 ಎಕರೆ ಜಮೀನಿನಲ್ಲಿ ಕೈಗೆತ್ತಿಕೊಳ್ಳಲು ಉದ್ದೇಶಿಸಿರುವ ಮೀನು ಸಾಕಾಣಿಕೆ ಸ್ಥಳಕ್ಕೆ ಭೇಟಿ ನೀಡಿ ಮಾಹಿತಿ ನೀಡಿದರು.

ಜಿಲ್ಲೆಯಲ್ಲಿರುವ ಜಲಮಾರ್ಗದ ಮುಖಾಂತರ ಪ್ರವಾಸೋದ್ಯಮ ವನ್ನು ಅಭಿವೃದ್ಧಿಪಡಿಸಿದಲ್ಲಿ ಸ್ಥಳೀಯ ಜನರಿಗೆ ವಿವಿಧ ಆರ್ಥಿಕವಾಗಿ ಪ್ರಯೋಜನವನ್ನು ಪಡೆದುಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ನದಿತೀರದಲ್ಲಿಜಲಮಾರ್ಗದಮುಖಾಂತರಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಿದ್ದಲ್ಲಿ ಹೆಚ್ಚಿನ ಸಂಖ್ಯೆ ಪ್ರವಾಸಿಗರ ಗಮನ ಹೆಚ್ಚು ಸೆಳೆಯಬಹುದು. ಜೊತೆಗೆ ಈ ಯೋಜನೆಯಿಂದ ಸ್ಥಳೀಯ ಜನರು ವಿವಿಧ ಆರ್ಥಿಕ ಪ್ರಯೋಜನಗಳು ಪಡೆದುಕೊಳ್ಳಬಹುದು ಎಂದರು.





ಈ ಯೋಜನೆಯನ್ನು ಅಭಿವೃದ್ಧಿಪಡಿಸಿದಲ್ಲಿ ಪ್ರವಾಸಿಗರು ಮತ್ತು ಸುತ್ತಮುತ್ತ ಪ್ರದೇಶದ ನಿವಾಸಿಗಳಿಗೆ ನೀರು ಆಧಾರಿತ ಕ್ರೀಡೆಗಳನ್ನು ಅನುಭವಿಸುವ ಅವಕಾಶಗಳನ್ನು ಒದಗಿಸಿ ಪ್ರವಾಸೋದ್ಯಮ ಚಟುವಟಿಕೆಗಳು ಅಭಿವೃದ್ಧಿಯಾಗಲಿದೆ ಜಯರಾಮ್ ರಾಯ್ ಪುರ ಅವರು ತಿಳಿಸಿದರು.

ಈ ಪ್ರದೇಶದಲ್ಲಿ ದೋಣಿ/ನೌಕೆ ನಿರ್ಮಾಣ, ಬೋಟ್ ಯಾರ್ಡ್‌ಗಳು ಹಾಗೂ ಸಂಬಂಧಿತ ಉಪಕರಣಗಳ ತಯಾರಿಕೆ ಮುಂತಾದ ಇತರ ಬೆಂಬಲದೊಂದಿಗೆ ಉದ್ಯಮ ತೆರೆಯುವ ಸಾಮರ್ಥ್ಯವನ್ನು ಅಭಿವೃದ್ಧಿ ಪಡಿಸುವಿಕೆಯಲ್ಲಿ ನೆರವಾಗಲಿದೆ ಎಂದು ತಿಳಿಸಿದರು.

ಸುತ್ತ ಮುತ್ತಲಿನ ಜಿಲ್ಲೆಯಲ್ಲಿರುವ ಪ್ರವಾಸ ತಾಣಗಳು ಯುನೆಸ್ಕೋ ವಿಶ್ವ ಪರಂಪರೆಯ ಪಟ್ಟಿಯಲ್ಲಿದ್ದು, ಜಲಮಾರ್ಗದ ಅಭಿವೃದ್ಧಿಗೆ ಮೂಲಸೌಕರ್ಯ ಒದಗಿಸಿದ್ದಲ್ಲಿ ಪ್ರತಿದಿನ ಹೆಚ್ಚಿನ ಸಂಖ್ಯೆ ಪ್ರವಾಸಿಗರನ್ನು ಆಕರ್ಷಿಸಿ ಸರ್ಕಾರಕ್ಕೆ ಆದಾಯವನ್ನು ಗಳಿಸಬಹುದಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕೃಷ್ಣಭಾಗ್ಯ ಜಲ ನಿಗಮ ನಿಯಮಿತ ಅಧೀಕ್ಷಕ ಇಂಜಿನೀಯರ್ ಹಿರೇಗೌಡರ, ಕಾರ್ಯಪಾಲಕ ಇಂಜಿನಿಯರ್ ದೊಡ್ಡಮನಿ, ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಚಲವಾದಿ, ಕರ್ನಾಟಕ ಜಲಸಾರಿಗೆ ಮಂಡಳಿಯ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ್ ಪಾಂಡುರಂಗ ಕುಲಕರ್ಣಿ ಸೇರಿದಂತೆ ಮತ್ತಿತರು ಇದ್ದರು.

# ರಾಜ್ಯದಲ್ಲಿ ಜಲಸಾರಿಗೆ ಸಾಮರ್ಥ್ಯವನ್ನು ಹೆಚ್ಚಿಸುವ ಗುರಿ
# ನೆದರ್ಲ್ಯಾಂಡ್ಸ್ ಪೋಸ್ಪೋಲ್ ಸಂವಾದದಲ್ಲಿ ಕೆಎಂಬಿ ಸಿಇಒ ಅಭಿಮತ

**ಕೆ.ಎಂ.ಬಿ ನ್ಯೂಸ್ ಬೆಂಗಳೂರು:** ಬಂದರುಗಳು, ಒಳನಾಡಿನ ಜಲಮಾರ್ಗಗಳು ಮತ್ತು ಕರ್ನಾಟಕದ ಕರಾವಳಿ ಪ್ರದೇಶದ ಅಭಿವೃದ್ಧಿ ಮತ್ತು ನಿರ್ವಹಣೆಗೆ ರಾಜ್ಯ ಸರ್ಕಾರ ಮುಂದಾಗಿದೆ ಎಂದು ಕರ್ನಾಟಕ ಜಲಸಾರಿಗೆ ಮಂಡಳಿ ಮುಖ್ಯ ಕಾರ್ಯನಿರ್ವಾಣಾಧಿಕಾರಿ ಜಯರಾಮ್ ರಾಯ್ ಪುರ ಅವರು ತಿಳಿಸಿದರು.

ಬೆಂಗಳೂರಿನ ಹಡ್ಸನ್ ಸರ್ಕಲ್ ನಲ್ಲಿರುವ ಕೃಷಿ ಭವನದ ಎರಡನೇ ಮಹಡಿಯಲ್ಲಿ ನಡೆದ ನೆದರ್ಲ್ಯಾಂಡ್ಸ್ ಪೋಸ್ಪೋಲ್ ಸಂವಾದ ಸಭೆಯಲ್ಲಿ ಮಾತನಾಡಿದರು.

ದೇಶದ ಒಟ್ಟು ಬಂದರುಗಳಲ್ಲಿ ಸರಕು ಸಾಗಾಣೆ ಕೇವಲ 4.5% ರಷ್ಟು ಮಾತ್ರ ಇದೆ. ಮುಂಬರುವ ದಿನಗಳಲ್ಲಿ ಕರ್ನಾಟಕ ಜಲಸಾರಿಗೆ ದೃಷ್ಟಿಕೋನ ಯೋಜನೆಯ ಪ್ರಕಾರ, 2035 ರ ಯೋಜನಾ ವರ್ಷದಲ್ಲಿ ಕರ್ನಾಟಕದ ಜಲಸಾರಿಗೆ ಸಾಮರ್ಥ್ಯವನ್ನು ಶೇ.117 ರಷ್ಟು ಹೆಚ್ಚಿಸಲು ನಿರೀಕ್ಷಿಸಲಾಗಿದೆ ಎಂದರು.

ರಾಜ್ಯದಲ್ಲಿ ಒಟ್ಟು 13 ಪ್ರಮುಖ ಬಂದರುಗಳಿವೆ. ಕಾರವಾರ ಮತ್ತು ಹಳೆ ಮಂಗಳೂರು ಎಲ್ಲಾ ಹವಾಮಾನದ ಹಸಿರು–ಕ್ಷೇತ್ರ ಬಂದರುಗಳಾಗಿವೆ, ಉಳಿದವು ಲಂಗರು ಮತ್ತು ಹಗುರವಾದ ಬಂದರುಗಳಾಗಿ ಕಾರ್ಯನಿರ್ವಹಿಸುತ್ತವೆ. ಕರ್ನಾಟಕ ಜಲಸಾರಿಗೆ ಮಂಡಳಿ ಪ್ರಸ್ತುತ ರೈಲು ಮತ್ತು ರಸ್ತೆ ಮೂಲಸೌಕರ್ಯಗಳ ಮೂಲಕ ಸಮಗ್ರ ಬಂದರು ಸಂಪರ್ಕ ವರ್ಧನೆಗೆ ಯೋಜಿಸಲಾಗುತ್ತಿದೆ. ಬಂದರು ರಸ್ತೆ ಸಂಪರ್ಕ ಸಂಬಂಧಿತ ಯೋಜನೆಗಳಿಗಾಗಿ, ವಿಸ್ತೃತ ಯೋಜನಾ ವರದಿಗಳನ್ನು (ಡಿಪಿಆರ್) ತಯಾರಿಸಲು ಕೆಎಂಬಿ ರಾಷ್ಟ್ರೀಯ ಹೆದ್ದಾರಿ ಲಾಜಿಸ್ಟಿಕ್ಸ್ ಮ್ಯಾನೇಜ್ಮೆಂಟ್ ಲಿಮಿಟೆಡ್ (ಎನ್ಎಚ್ಎಲ್ಎಂಎಲ್) ಮತ್ತು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (ಎನ್ಎಚ್ಎಐ) ದೊಂದಿಗೆ ಒಪ್ಪಂದ ಮಾಡಿಕೊಂಡಿದ್ದು, ಈ ಎಲ್ಲಾ




ವಿಸ್ತೃತ ಯೋಜನಾ ವರದಿ (ಡಿಪಿಆರ್) ಮತ್ತು ಕಾರ್ಯಸಾಧ್ಯತೆಯ ಅಧ್ಯಯನ ವರದಿ(ಎಫ್ ಎಸ್ ಆರ್) ಗಳು ಪರಿಶೀಲನೆ ಮಾಡಿದ ನಂತರ ಅತೀ ಶೀಘ್ರದಲ್ಲೇ ಕಾಮಗಾರಿಗಳನ್ನು ಪ್ರಾರಂಭಿಸಲಾಗುತ್ತದೆ ಎಂದು ತಿಳಿಸಿದರು.

ಕಾರವಾರ ಬಂದರು ಉತ್ತರ ಕರ್ನಾಟಕ, ಆಂಧ್ರಪ್ರದೇಶ ಮತ್ತು ಮಹಾರಾಷ್ಟ್ರದ ರಾಜ್ಯಗಳಿಗೆ ವ್ಯಾಪಾರಕ್ಕೆ ಸಂಬಂಧಿಸಿದ ಅಗತ್ಯಗಳನ್ನು ಪೂರೈಸುತ್ತದೆ. ಕರ್ನಾಟಕದ ಸರಕು ಸಾಮರ್ಥ್ಯ ಮತ್ತು ಈ ಪ್ರದೇಶದಲ್ಲಿ ಬಂದರು ಆಧಾರಿತ ಕೈಗಾರಿಕೆಗಳನ್ನು ಉನ್ನತೀಕರಿಸುವ ಅಗತ್ಯತೆಯನ್ನು ಪರಿಗಣಿಸಿ, ಕಾರವಾರ ಬಂದರಿನ ವಿಸ್ತರಣೆಯನ್ನು ಕಲ್ಪಿಸಲಾಗುತ್ತಿದೆ ಎಂದರು.

ಈ ಸಭೆಯಲ್ಲಿ ನೆದರ್ಲ್ಯಾಂಡ್ಸ್ ಕಾನ್ಸುಲೇಟ್ ಜನರಲ್ ಎವುಟ್ ಡಿ ವಿಟ್, ನವದೆಹಲಿಯ ನೆದರ್ಲ್ಯಾಂಡ್ಸ್ ರಾಯಭಾರ ಕಚೇರಿಯ ಪ್ರಥಮ ಕಾರ್ಯದರ್ಶಿ ಪೌಲಿನಾ ಕ್ರೋಮಿಕ್, ಪೋಸ್ಪೋಲ್, ಕೆ.ಎಂಬಿ ಸಿಬ್ಬಂದಿ ಸೇರಿದಂತೆ ಇತರರು ಭಾಗವಹಿಸಿದರು.



# ಮಂಗಳೂರಿನಲ್ಲೂ ಪ್ರಾರಂಭವಾಗಲಿದೆ ವಾಟರ್ ಮೆಟ್ರೋ ನೇತ್ರಾವತಿ, ಗುರುಪುರ ಮಧ್ಯೆ ಸಂಪರ್ಕ ಕಲ್ಪಿಸಲಿರುವ ಜಲಮಾರ್ಗ




**ಕೆ.ಎಂ.ಬಿ ನ್ಯೂಸ್ ಮಂಗಳೂರು:** ರಾಷ್ಟ್ರೀಯ ಹೆದ್ದಾರಿಗಳು, ಬಂದರು ಮತ್ತು ವಿಮಾನ ನಿಲ್ದಾಣಗಳಂತಹ ಬಹು ಸಂಪರ್ಕ ಸೌಲಭ್ಯಗಳನ್ನು ಹೊಂದಿರುವ ಮಂಗಳೂರಿನಲ್ಲಿ ಇದೀಗ ಕೇರಳದ ಕೊಚ್ಚಿ ಮಾದರಿಯಲ್ಲಿ ವಾಟರ್ ಮೆಟ್ರೋ ಯೋಜನೆಗಳನ್ನು ಆರಂಭಿಸಲು ಯೋಜನೆ ರೂಪಿಸಲಾಗಿದೆ ಎಂದು ಕರ್ನಾಟಕ ಜಲಸಾರಿಗೆ ಮಂಡಳಿಯ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಜಯರಾಮ್ ರಾಯ್ ಪುರ ಅವರು ತಿಳಿಸಿದ್ದಾರೆ.

ಕರ್ನಾಟಕ ಜಲಸಾರಿಗೆ ಮಂಡಳಿ, ಮಂಗಳೂರು ವಾಟರ್ ಮೆಟ್ರೋ ಯೋಜನೆಗೆ ಸಮಗ್ರವಾದ ಯೋಜನಾ ವರದಿಯನ್ನು ರೂಪಿಸಲು ನಿರ್ಧರಿಸಿದೆ. ಈ ಯೋಜನೆ ನೇತ್ರಾವತಿ ಮತ್ತು ಗುರುಪುರ ನದಿಗಳ ಎರಡೂ ದಡಗಳಲ್ಲಿ ಬಜಾಲ್ ನಿಂದ ಮರವೂರುವರೆಗೆ ಸಂಪರ್ಕ ಕಲ್ಪಿಸುವ ಗುರಿ ಹೊಂದಿದೆ.

ಈ ಯೋಜನೆ ಜಾರಿಗೆ ಬಂದರೆ ಕೊಚ್ಚಿಯ ನಂತರ ಭಾರತದ ಎರಡನೇ ಅತಿದೊಡ್ಡ ಜಲ ಸಾರಿಗೆ ವ್ಯವಸ್ಥೆಯಾಗಲಿದೆ. ಈ ಯೋಜನೆಯು ಪರಿಸರ ಸ್ನೇಹಿಯಾಗಿದೆ ಎಂದು ಕೆಎಂಬಿ ಸಿಇಒ ತಿಳಿಸಿದ್ದಾರೆ. ಆರಂಭದಲ್ಲಿ ನೇತ್ರಾವತಿ–ಗುರುಪುರ ನದಿ ಹಿನ್ನೀರಿನ ಉದ್ದಕ್ಕೂ ಸುಮಾರು 30 ಕಿಲೋಮೀಟರ್ ದೂರದವರೆಗೆ ಬೋಟ್ ಸಂಚರಿಸಲಿದೆ. ಬಳಿಕ ಬಜಾಲ್ನಿಂದ ಪ್ರಾರಂಭವಾಗಿ ಗುರುಪುರದ ಮರವೂರು ಸೇತುವೆಯವರೆಗೆ ವಿಸ್ತರಿಸಲಿದೆ. ಇದು ಸುಮಾರು 17 ಆಧುನಿಕ ಮೆಟ್ರೋ ನಿಲ್ದಾಣಗಳನ್ನು ಹೊಂದಿರಲಿದೆ. ಯೋಜನೆಯು ಸಮಗ್ರ ಅಭಿವೃದ್ಧಿಯನ್ನು ಸಾಧಿಸುವ ಗುರಿಯನ್ನು ಹೊಂದಿದೆ. ಈ ಯೋಜನೆ ಜೀವನೋಪಾಯದ ಅವಕಾಶಗಳನ್ನು ಹೆಚ್ಚಿಸಲಿದೆ ಮತ್ತು ಜೀವನದ ಗುಣಮಟ್ಟವನ್ನು ಸುಧಾರಿಸಲಿದೆ ಎಂದು ಕೆಎಂಬಿ ಸಿಇಒ ಮಾಹಿತಿ ನೀಡಿದ್ದಾರೆ.

ಈ ಯೋಜನೆಯು ಆರ್ಥಿಕ ಬೆಳವಣಿಗೆಯನ್ನು ಉತ್ತೇಜಿಸುತ್ತದೆ, ಟ್ರಾಫಿಕ್ ಸಮಸ್ಯೆಗೆ ಪರಿಹಾರ ಮತ್ತು ಇಂಗಾಲದ ಹೊರಸೂಸುವಿಕೆ ಕಡಿಮೆ ಮಾಡುವ ಗುರಿಯನ್ನು ಹೊಂದಿದೆ. ಸೋಮೇಶ್ವರ ದೇವಸ್ಥಾನ, ಉಳ್ಳಾಲ ಮತ್ತು ನವಮಂಗಳೂರು ಬಂದರು ಮುಂತಾದ ಪ್ರಮುಖ ಸ್ಥಳಗಳನ್ನು ಉದ್ದೇಶಿತ ಮಾರ್ಗದಲ್ಲಿ ಸೇರಿಸಲಾಗಿದೆ. ಈ ಯೋಜನೆಯಡಿ ಅತ್ಯಾಧುನಿಕ ಎಲೆಕ್ಟ್ರಿಕ್ ಮತ್ತು ಡೀಸೆಲ್ ಬೋಟ್ ಗಳನ್ನು ಬಳಕೆ ಮಾಡಲಾಗುತ್ತದೆ. ಬೋಟ್ ಗಳಲ್ಲಿ ಅಗತ್ಯ ಮೂಲ ಸೌಲಭ್ಯ ಕಲ್ಪಿಸಲಾಗುತ್ತದೆ ಎಂದು ಕೆಎಂಬಿ ಸಿಇಒ ತಿಳಿಸಿದ್ದಾರೆ.

# ಕಾರವಾರ ಬಂದರಿನಲ್ಲಿ ಸ್ವಚ್ಛ ಭಾರತ ಅಭಿಯಾನ



**ಕೆ.ಎಂ.ಬಿ ನ್ಯೂಸ್ ಕಾರವಾರ:** ಸ್ವಚ್ಛ ಭಾರತ ಅಭಿಯಾನ ಕಾರ್ಯಕ್ರಮದಡಿ ನಗರಾಭಿವೃದ್ಧಿ ಇಲಾಖೆ ವತಿಯಿಂದ 'ಸ್ವಚ್ಛತೆಯೇ ಸೇವೆ' 2024: ಸ್ವಭಾವ ಸ್ವಚ್ಛತೆ, ಸಂಸ್ಕಾರ ಸ್ವಚ್ಛತೆ' ಅಭಿಯಾನವನ್ನು ನಗರದ ಮೂಲಸೌಲಭ್ಯ ಅಭಿವೃದ್ಧಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಕರ್ನಾಟಕ ಜಲಸಾರಿಗೆ ಮಂಡಳಿಯ ಸಿಬ್ಬಂದಿಯವರು ಹಮ್ಮಿಕೊಂಡಿದ್ದಾರೆ. ರಾಷ್ಟ್ರಪಿತ ಮಹಾತ್ಮ ಗಾಂಧಿಯವರ 155ನೇ ಜನ್ಮ ವರ್ಷಾಚರಣೆ ಸಂದರ್ಭದಲ್ಲಿ, ಅವರ ಧ್ಯೇಯವಾಗಿದ್ದ ಸ್ವಚ್ಛತೆಯ ಹಾದಿಯಲ್ಲಿ ಸ್ವಚ್ಛತೆಯೇ ಸೇವೆ ಅಭಿಯಾನ ಕೈಗೊಂಡಿದ್ದಾರೆ.

# ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ರಾಜ್ಯ ಜಲಸಾರಿಗೆ ಜಲಮಾರ್ಗಗಳ ಸಾರಿಗೆ ಸಮಿತಿಯ ಮೊದಲ ಸಭೆ

**ಕೆ.ಎಂ.ಬಿ ನ್ಯೂಸ್ ಬೆಂಗಳೂರು:** ಕರ್ನಾಟಕ ಜಲಸಾರಿಗೆ ಮಂಡಳಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಯರಾಮ್ ರಾಯ್ ಪುರ ಅವರು ಗೌರವಾನ್ವಿತ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರನ್ನು ಹೂಗುಚ್ಛ ನೀಡಿ ಸ್ವಾಗತಿಸಿದರು.

ರಾಜ್ಯ ಜಲ ಸಾರಿಗೆ ಸಮನ್ವಯ ಸಮಿತಿಯ ಅಧ್ಯಕ್ಷರಾಗಿ, ಅವರು ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರೊಂದಿಗೆ ಉದ್ಘಾಟನಾ ಸಭೆಯಲ್ಲಿ ಭಾಗವಹಿಸಿದ್ದರು. ಈ ಸಭೆಯಲ್ಲಿ, ಅವರು ಕರ್ನಾಟಕ ಜಲಸಾರಿಗೆ ಮಂಡಳಿಯ ಪ್ರಸ್ತುತ ಸ್ಥಿತಿ ಮತ್ತು ಚಟುವಟಿಕೆಗಳನ್ನು ನಿರ್ಣಯಿಸಲು ಅವಕಾಶವನ್ನು ಬಳಸಿಕೊಂಡರು. ಇದು ನಡೆಯುತ್ತಿರುವ ಯೋಜನೆಗಳು, ಮಂಡಳಿ ಎದುರಿಸುತ್ತಿರುವ ಸವಾಲುಗಳು ಮತ್ತು ರಾಜ್ಯದಲ್ಲಿ ಜಲ ಸಾರಿಗೆಯ ದಕ್ಷತೆ ಮತ್ತು ಪರಿಣಾಮಕಾರಿತ್ವವನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವ ಕಾರ್ಯತಂತ್ರದ ಉಪಕ್ರಮಗಳ ಸಮಗ್ರ ಪರಿಶೀಲನೆಯನ್ನು ಒಳಗೊಂಡಿದೆ. ಸುಧಾರಣೆಗಾಗಿ ಪ್ರಮುಖ ಕ್ಷೇತ್ರಗಳನ್ನು ಗುರುತಿಸುವುದು, ನಿಯಂತ್ರಕ ಅನುಸರಣೆಯನ್ನು ಖಚಿತಪಡಿಸಿಕೊಳ್ಳುವುದು ಮತ್ತು ಕಡಲ ವಲಯದ ವಿವಿಧ ಮಧ್ಯಸ್ಥಗಾರರ ನಡುವೆ ಸಹಯೋಗವನ್ನು ಉತ್ತೇಜಿಸುವ ಬಗ್ಗೆ ಚರ್ಚೆಗಳು ನಡೆದವು. ಈ ಸಭೆಯಲ್ಲಿ ಅವರ ಒಳನೋಟಗಳು ಮತ್ತು ನಾಯಕತ್ವವು ಮಂಡಳಿಯ ಉದ್ದೇಶಗಳನ್ನು



ರಾಜ್ಯ ಜಲ ಸಾರಿಗೆ ಅಭಿವೃದ್ಧಿಯ ವಿಶಾಲ ಗುರಿಗಳೊಂದಿಗೆ ಹೊಂದಿಸುವಲ್ಲಿ ನಿರ್ಣಾಯಕವಾಗಿತ್ತು.

# ಮಂಗಳೂರಿಗೆ ವಾಟರ್ ಮೆಟ್ರೋ

**ಯೋಜನೆಗೆ 1,600 ಕೋಟಿ ರೂ. ವೆಚ್ಚದಲ್ಲಿ ಸಿದ್ಧತೆ**

**ಯೋಜನೆಗೆ 1,600 ಕೋಟಿ ರೂ. ವೆಚ್ಚದಲ್ಲಿ ಸಿದ್ಧತೆ**



**ಕೆ.ಎಂ.ಬಿ ಸ್ಪೆಷಲ್ ಸ್ಟೋರಿ:** ಮಂಗಳೂರಿನಲ್ಲಿ ಜಲಸಾರಿಗೆ ಮತ್ತಷ್ಟು ವ್ಯಾಪಕವಾಗಿಸಲು ಪಣತೊಟ್ಟಿರುವ ಕರ್ನಾಟಕ ಜಲಸಾರಿಗೆ ಮಂಡಳಿಯು ಪಂಚ ಯೋಜನೆಗಳನ್ನು ಹಾಕಿಕೊಂಡಿದೆ. ಎರಡನೇ ಬಂದರು ಕೂಡ ನಿರ್ಮಾಣ ಗೊಂಡು ನಿಜಾರ್ಥದಲ್ಲಿ ಬಂದರು ನಗರಿಯೇ ಆಗಲಿದೆ.

ಮಂಡಳಿಯ ಐದು ಯೋಜನೆಗಳ ಪೈಕಿ ಪ್ರಮುಖವಾಗಿರುವುದು ವಾಟರ್ ಮೆಟ್ರೋ. ಜಲ ಮೆಟ್ರೋ ಸೇವೆಯನ್ನು ಮಂಗಳೂರಿನ ಪಾಲ್ಗುಣಿ (ಗುರುಪುರ) ಹಾಗೂ ನೇತ್ರಾವತಿ ನದಿಗಳಲ್ಲಿ ಪರಿಚಯಿಸಲಾಗುತ್ತದೆ. ಸದ್ಯ ರಾಜ್ಯ ಸರ್ಕಾರ ಈ ಜಲ ಮೆಟ್ರೋ ಯೋಜನೆಯನ್ನು ಅಂದಾಜು 1,600 ಕೋಟಿ ರೂಪಾಯಿಗಳ ವೆಚ್ಚದಲ್ಲಿ ಅನುಷ್ಠಾನಗೊಳಿಸಲು ಮುಂದಾಗಿದೆ. ಹೀಗಾಗಲೇ ಡಿಪಿಆರ್ ತಯಾರಿ ಪ್ರಗತಿಯಲ್ಲಿದ್ದು, ಅದು ಸಿದ್ಧವಾದ ನಂತರ ಯೋಜನೆಯ ಮೊತ್ತಷ್ಟು ಮೆಟ್ರೋ  ವೇಗವಾಗಿ ಆರಂಭಗೊಳ್ಳಲಿದೆ.

## 17 ಜೆಟ್ಟಿಗಳಲ್ಲಿ ಜಲ ಮೆಟ್ರೋ ಸೇವೆ

ಫಾಲ್ಗುಣಿ ನದಿಯಲ್ಲಿ ಮರವೂರು ಸೇತುವೆಯಿಂದ ಕೂಳೂರು, ತಣ್ಣೀರು ಬಾವಿ ಮೂಲಕ ನೇತ್ರಾವತಿ ನದಿಯಲ್ಲಿ ಉಳ್ಳಾಲದವರೆಗೆ ಈ ಜಲ ಮೆಟ್ರೋ ಕಾರ್ಯಾಚರಿಸಲಿದೆ. ಸುಮಾರು 17 ಕಿ.ಮೀ. ಅಂತರದಲ್ಲಿ ಒಟ್ಟು 17 ಜೆಟ್ಟಿಗಳು ಬರಲಿವೆ. ಈಗಾಗಲೇ ಬೇರೆ ಬೇರೆ ಯೋಜನೆಯಲ್ಲಿ 10 ಜೆಟ್ಟಿಗಳು ನಿರ್ಮಾಣವಾಗುತ್ತಿವೆ. ಈ ಜೆಟ್ಟಿಗಳನ್ನು ಜಲ ಮೆಟ್ರೋ ಯೋಜನೆಯಲ್ಲಿ ಸಂಯೋಜಿಸಲಾಗುತ್ತದೆ. ಹಾಗಾಗಿ, ಜಲ ಮೆಟ್ರೋಗೆ ಹೊಸದಾಗಿ ಏಳು ಜೆಟ್ಟಿಗಳಷ್ಟೇ ನಿರ್ಮಿಸಬೇಕಾಗುವುದರಿಂದ ಯೋಜನಾ ವೆಚ್ಚ ಕಡಿತವಾಗುವ ನಿರೀಕ್ಷೆಯಿದೆ. ಜೆಟ್ಟಿಗಳಲ್ಲಿಳಿದ ಪ್ರಯಾಣಿಕರಿಗೆ ಸಾರಿಗೆ ಬಸ್ಸಿನ ಸಂಪರ್ಕವನ್ನೂ ಕಲ್ಪಿಸಲಾಗುತ್ತದೆ.

## ಏನಿದು ಜಲ ಮೆಟ್ರೋ ಯೋಜನೆ?

ಕೇರಳದ ಕೊಚ್ಚಿಯಲ್ಲಿ ಬಿಟ್ಟರೆ ದೇಶದ ಯಾವುದೇ

### ಜಲಸಾರಿಗೆ ವಸ್ತು ಸಂಗ್ರಹಾಲಯ ಸ್ಥಾಪನೆ

ಮಂಗಳೂರಿನಲ್ಲಿ ಜಲಸಾರಿಗೆ ವಸ್ತುಸಂಗ್ರಹಾಲಯವನ್ನೂ ನಿರ್ಮಾಣ ಮಾಡಲಾಗುತ್ತದೆ. ಮಂಗಳೂರು ಹಳೇ ಬಂದರು ಸಮೀಪ ಜಲಸಾರಿಗೆ ಮಂಡಳಿಯ ಸುಮಾರು ಒಂದುಕಾಲು ಎಕರೆ ಜಾಗವಿದೆ. ಅಲ್ಲೇ ವಸ್ತುಸಂಗ್ರಹಾಲಯ ನಿರ್ಮಿಸಲಾಗುತ್ತದೆ. ಈ ವಸ್ತುಸಂಗ್ರಹಾಲಯದಲ್ಲಿ ರಾಣಿ ಅಬ್ಬಕ್ಕನ ಪ್ರತಿಮೆ ಸ್ಥಾಪಿಸಲಾಗುತ್ತದೆ. ಜೊತೆಗೆ ಹಡಗು ಹಾಗೂ ಕರ್ನಾಟಕದ ಜಲಸಾರಿಗೆ ಇತಿಹಾಸವನ್ನು ತಿಳಿಸುವಂತಹ ಪ್ರಯತ್ನ ಮಾಡಲಾಗುತ್ತದೆ.

ಭಾಗದಲ್ಲಿ ಜಲ ಮೆಟ್ರೋ ಸೇವೆ ಇಲ್ಲ. ಜಲ ಮೆಟ್ರೋ ಸಣ್ಣ ಹಡಗಿನ ರೀತಿ ಇರಲಿದೆ. ನದಿ ಅಥವಾ ಸಮುದ್ರ ಮಾರ್ಗದಲ್ಲಿ ಸಂಚರಿಸಿ, ಕರಾವಳಿ ಮತ್ತು ನದಿ ಪಾತ್ರದಲ್ಲಿರುವ ಪ್ರಮುಖ ಪಟ್ಟಣಗಳಿಗೆ ಸಂಪರ್ಕ ಕಲ್ಪಿಸುತ್ತದೆ. ಆಕರ್ಷಕವಾಗಿ ವಿನ್ಯಾಸಗೊಳಿಸಲಾದ ಜಲ ಮೆಟ್ರೋ ವೇಗವಾಗಿ ಚಲಿಸುವ ಮೂಲಕ ಪ್ರಯಾಣಿಕರನ್ನು ತ್ವರಿತವಾಗಿ ನಿರ್ದಿಷ್ಟ ಗಮ್ಯ ಸ್ಥಾನ ಸೇರಿಸುತ್ತದೆ. ಅಲ್ಲದೆ, ರಸ್ತೆಗಳಲ್ಲಿ ಉಂಟಾಗುವ ಸಂಚಾರ ದಟ್ಟಣೆ ಕಡಿಮೆಗೊಳಿಸಲು ಸಹಕಾರಿಯಾಗಿದೆ. ಜೊತೆಗೆ ತೀರ ಪ್ರದೇಶದಲ್ಲಿ ಸಂಪರ್ಕ ಜಾಲ ಬಲಗೊಂಡು ಪ್ರವಾಸೋದ್ಯಮ ಹಾಗೂ ವ್ಯಾಪಾರ ಚಟುವಟಿಕೆಗಳು ವೃದ್ಧಿಸಲಿವೆ.



## ಬೆಂಗ್ರೆಯಲ್ಲಿ ನೂತನ ಕೋಸ್ಟಲ್ ಬರ್ತ್

ಪ್ರಸಕ್ತ ಮಂಗಳೂರಿನ ಹಳೇ ಬಂದರು ಮುಖ್ಯವಾಗಿ ಮೀನುಗಾರಿಕಾ ಚಟುವಟಿಕೆಗಳಿಗಷ್ಟೇ ಸೀಮಿತವಾಗಿದೆ. ಸುಮಾರು 50 ಸರಕು ಹಡಗುಗಳಷ್ಟೇ ಇಲ್ಲಿಗೆ ಆಗಮಿಸಿ ತೆರಳುತ್ತವೆ. ಆದರೆ, ಇದು ಪ್ರವಾಸಿಗರನ್ನು ಮೋಡಿ ಮಾಡಲು ತನ್ನ ಪ್ರಾಚೀನತೆ ಉಳಿಸಿಕೊಂಡಿದೆ. ಇಂತಹ ಹಳೇ ಬಂದರನ್ನು ಆಧುನೀಕರಿಸಿ, ಜಲಸಾರಿಗೆಯ ಹಬ್ ಮಾಡುವುದಕ್ಕೆ ಜಲಸಾರಿಗೆ ಮಂಡಳಿ ರೂಪರೇಷೆ ಸಿದ್ಧಪಡಿಸಿದೆ. ಕಾರ್ಗೋಗೆ ಅನುಕೂಲವಾಗುವಂತೆ ಬೆಂಗ್ರೆಯಲ್ಲಿ ಕೋಸ್ಟಲ್ ಬರ್ತ್ ನಿರ್ಮಾಣ ಸಹ ಮಾಡಲಾಗುತ್ತಿದೆ.



"ಕರ್ನಾಟಕ ಜಲಸಾರಿಗೆ ಮಂಡಳಿಯು ಮಂಗಳೂರು ಹಳೇ ಬಂದರಿನ ಅಭಿವೃದ್ಧಿಯನ್ನು ಸರ್ವತೋಮುಖವಾಗಿ ಮಾಡಲಾಗುತ್ತದೆ. ಪ್ರಸಕ್ತ ಇರುವ ಬರ್ತ್‌ಗಳನ್ನು ಆಧುನೀಕರಿಸಲಾಗುತ್ತಿದೆ. ಇದು ಹಳೇ ಬಂದರನ್ನು ಚಟುವಟಿಕೆಗಳ ತಾಣವನ್ನಾಗಿ ಮಾಡಲಿದೆ.

ಜಯರಾಮ್ ರಾಯ್ ಪುರ, ಕರ್ನಾಟಕ ಜಲಸಾರಿಗೆ ಮಂಡಳಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ

## ಉಳ್ಳಾಲದಲ್ಲಿ ಎಂಐಸಿಟಿಪಿ ನಿರ್ಮಾಣ

ಮಂಗಳೂರು ಅಂತಾರಾಷ್ಟ್ರೀಯ ಕ್ರೂಸ್ ಅಂಡ್ ಟೂರಿಸಂ ಪೋರ್ಟ್ (ಎಂಐಸಿಟಿಪಿ) ನಿರ್ಮಿಸಲು ಕರ್ನಾಟಕ ಜಲಸಾರಿಗೆ ಮಂಡಳಿ ಮುಂದಾಗಿದೆ. ಮಂಗಳೂರಿನಿಂದ ದಕ್ಷಿಣಕ್ಕೆ 8 ಕಿ.ಮೀ. ದೂರದಲ್ಲಿರುವ ಉಳ್ಳಾಲದಲ್ಲಿ ನಿರ್ಮಿಸಲುದ್ದೇಶಿಸಿರುವ ಎಂಐಸಿಟಿಪಿಯ ವಿಸ್ತೃತ ಯೋಜನಾ ವರದಿ (ಡಿಪಿಆರ್) ತಯಾರಿಸಲು ಐಐಟಿ ಮದ್ರಾಸ್‌ಗೆ ವಹಿಸಲಾಗಿದೆ. ದೇಶದ ಬೇರೆಲ್ಲೂ ಇಲ್ಲದ ಕ್ರೂಸ್ ಅಥವಾ ಪ್ರವಾಸೋದ್ಯಮ ಬಂದರನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವ (ಪಿಪಿಪಿ)ದಲ್ಲಿ ಅಭಿವೃದ್ಧಿಪಡಿಸಲಾಗುತ್ತದೆ. ವಿಲಾಸಿ ಹಡಗುಗಳ (ಕ್ರೂಸ್) ಯಾನಕ್ಕೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಈ ಬಂದರು ನಿರ್ಮಿಸಲಾಗುತ್ತಿಯಾದರೂ ಬಂದರಿನ ನಿರಂತರ ಕಾರ್ಯಾಚರಣೆಗಾಗಿ ಕ್ಲೀನ್ ಕಾರ್ಗೋಗೂ ಅವಕಾಶ ಸಹ ನೀಡಲಾಗುತ್ತದೆ.

## ಹಳೇ ಬಂದರಿನಲ್ಲಿ ಡ್ರೆಜ್ಜಿಂಗ್

ಮಂಗಳೂರು ಹಳೇ ಬಂದರಿನ ದಕ್ಕೆಯಲ್ಲಿ ಹೂಳು ತುಂಬಿರುವುದರಿಂದ ದೋಣಿಗಳು, ಸರಕು ಹಡಗುಗಳ ಸಂಚಾರಕ್ಕೆ ತೊಂದರೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ಹಳೇ ಬಂದರಿನಲ್ಲಿ ಡ್ರೆಜ್ಜಿಂಗ್ (ಹೂಳೆತ್ತುವುದು) ಕಾರ್ಯ ಅತಿ ಶೀಘ್ರದಲ್ಲಿ ಪ್ರಾರಂಭವಾಗಲಿದೆ. ಈಗಾಗಲೇ ಮಂಡಳಿ ಗುತ್ತಿಗೆದಾರರಿಗೆ ಕಾರ್ಯಾದೇಶ ನೀಡಿದೆ. ಒಟ್ಟು 30 ಕೋಟಿ ರೂಪಾಯಿ ವೆಚ್ಚದಲ್ಲಿ ಡ್ರೆಜ್ಜಿಂಗ್ ನಡೆಸಲಾಗುತ್ತದೆ ಎಂದು ಮಂಡಳಿ ಮುಖ್ಯ ಕಾರ್ಯನಿರ್ವಹಣಾಕಾರಿ ತಿಳಿಸಿದ್ದಾರೆ.

